**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 34/2024**

**ಚಾ.ಸಾ. :- 20**
**ಪ್ರಾ.ಸಾ. :- 04**

| | | |
|---|---|---|
| ಹೆಸರು | : | ಪ್ರಕಾಶ್.ಬಿ.ಎಸ್. |
| ತಂದೆಯ ಹೆಸರು | : | ಸಿದ್ದಯ್ಯ |
| ವಯಸ್ಸು | : | 44 ವರ್ಷ |
| ಉದ್ಯೋಗ | : | ಪೊಲೀಸ್ ನಿರೀಕ್ಷಕರು, ಮೈಸೂರು |
| ವಾಸಸ್ಥಳ | : | ಮೈಸೂರು. |

---

**ಪ್ರಮಾಣೀಕರಿಸಲಾದ ದಿನಾಂಕಃ- 06.04.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2022 ರಿಂದ 2025 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪಿ.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 21.01.2024 ರಂದು ನಾನು ಚಾ.ಸಾ-18 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಚಾ.ಸಾ-4 ರವರು ಮೃತರನ್ನು ಗುರುತಿಸಿದ್ದು, ಅವರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ಚಾ.ಸಾ-19 ರವರ ಮೂಲಕ ಶವಪಂಚನಾಮೆ ಜರುಗಿಸಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು ನಿಪಿ-5 ಎಂದು ಗುರುತಿಸಲಾಯಿತು.

ತನಿಖಾ ಸಮಯದಲ್ಲಿ ಸಿಬ್ಬಂದಿಗಳ ಮೂಲಕ ಫೋಟೋಗಳನ್ನು ತೆಗೆಸಿದ್ದು, ಆ ಸಂಬಂಧವಾಗಿ ಕಲಂ.65(ಬಿ) ಭಾರತೀಯ ಸಾಕ್ಷ್ಯ ಅಧಿನಿಯಮದಡಿ ಸರ್ಟಿಫಿಕೇಟ್ ಪಡೆದುಕೊಂಡಿರುತ್ತೇನೆ. ಸದರಿ ಸರ್ಟಿಫಿಕೇಟನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಅಪಘಾತಪಡಿಸಿದ ವಾಹನದ 'ಬಿ' ಎಕ್ಸ್ಟ್ರಾಕ್ಟ್ ಕೋರಿ ಮನವಿ ಸಲ್ಲಿಸಿದ್ದು, ನಂತರ ಅದನ್ನು ಸ್ವೀಕರಿಸಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ ವಾಹನವನ್ನು ಪಂಚರ ಸಮಕ್ಷಮ ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು. ಸದರಿ ವಾಹನದ ಫೋಟೋವನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-11 ಮತ್ತು 12 ಎಂದು ಗುರುತಿಸಲಾಯಿತು.

ಅಪಘಾತಕ್ಕೆ ಸಂಬಂಧಿಸಿದಂತೆ ವಾಹನವನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸುವಂತೆ ಆರ್.ಟಿ.ಓ.ರವರಿಗೆ ಮನವಿ ಸಲ್ಲಿಸಿ, ನಂತರದಲ್ಲಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಐ.ಎಂ.ವಿ.ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-13 ಎಂದು ಗುರುತಿಸಲಾಯಿತು.

ಚಾ.ಸಾ-2 ರವರು ಠಾಣೆಯಲ್ಲಿ ಆರೋಪಿಯನ್ನು ನೋಡಿ ಗುರುತಿಸಿದ್ದು, ಅವರ ಮುಂದುವರೆದ ಹೇಳಿಕೆಯನ್ನು ದಾಖಲು ಮಾಡಿಕೊಂಡಿರುತ್ತೇನೆ.

ಆರೋಪಿ ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿ ಬಾಂಡ್ ಪಡೆದು ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಿರುತ್ತೇನೆ.

ತನಿಖಾ ಸಮಯದಲ್ಲಿ ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ.

ನಂತರ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ಪ್ರಕರಣವನ್ನು ನನ್ನ ಅಧೀನ ಅಧಿಕಾರಿಗಳು ತನಿಖೆ ಮಾಡಿದ್ದು, ಅದನ್ನು ಪರಿಶೀಲಿಸಿರುತ್ತೇನೆ. ದೂರು ಪಡೆಯುವುದಕ್ಕೂ ಮುಂಚೆ ಅಪಘಾತದ ಬಗ್ಗೆ ಆಸ್ಪತ್ರೆಯಿಂದ ಮಾಹಿತಿ ಬಂದಿರುತ್ತದೆ. ಸದರಿ ಮಾಹಿತಿ ಆಧಾರದ ಮೇಲೆ ನಾವು ಸ್ಥಳಕ್ಕೆ ಹೋಗಿರುವುದಿಲ್ಲ ಹಾಗೂ 10 ದಿನಗಳ ನಂತರ ಪ್ರಕರಣ ದಾಖಲು ಮಾಡಿರುತ್ತೇವೆ ಎಂದರೆ ಸಾಕ್ಷಿ ಮೃತರ ವಾರಸುದಾರರು ಪತ್ತೆಯಾಗಿರುವುದಿಲ್ಲ, ಅವರನ್ನು ಪತ್ತೆ ಮಾಡಲು ನಮ್ಮ ಸಿಬ್ಬಂದಿ ಪ್ರಯತ್ನಿಸುತ್ತಿದ್ದರು ಎನ್ನುತ್ತಾರೆ. ಸದರಿ ವಿಚಾರವನ್ನು ಅಂತಿಮ ವರದಿಯಲ್ಲಿ ಹೇಳಿಲ್ಲ ಎಂದರೆ ಸರಿ. ಮೃತರ ವಾರಸುದಾರರು ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿಯೇ ವಾಸವಿದ್ದರೂ, ಅವರನ್ನು ಪತ್ತೆಹಚ್ಚಲು ನಾವು ಪ್ರಯತ್ನಿಸಿರುವುದಿಲ್ಲ ಎಂದರೆ ಸುಳ್ಳು.

ನಿಪಿ-9 ನ್ನು ಯಾರ ಹೇಳಿಕೆಯ ಆಧಾರದ ಮೇಲೆ ಬರೆದಿರುತ್ತಾರೆಂದು ಉಲ್ಲೇಖ ಇಲ್ಲ ಎಂದರೆ ಸಾಕ್ಷಿ ನಾನು ಹೇಳಿ ಬರೆಯಿಸಿರುತ್ತೇನೆ ಎನ್ನುತ್ತಾರೆ.

ಸಾಕ್ಷಿದಾರರ ಹೇಳಿಕೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ :-</u> ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**